ಮೈಸೂರು ಡಿಸ್ಟ್ರಿಕ್ಟ್.

ಇಸ್ತಿಹಾರ್ನಾಮೆ.

ತಾರೀಖು 3—5ನೆ ಅಕ್ಟೋಬರ್ 1907.

1906ನೆ ಇಸವಿ ನವಂಬರ್ 8ನೆ ನಂಬರ್ F. L. 3304-6—S. R. 146-05-7ನೆ ಗೌರ್ನಮೆಂಟ್ ಆರ್ಡರು ಅನುಸರಿಸಿ ಈ ಮೂಲಕ ತಿಳಿಯಪಡಿಸುವದೇನಂದರೆ,—

ಡಿಸ್ಟ್ರಿಕ್ಟ ಮಜಕೂರು ಇನಾಂ ಗ್ರಾಮಗಳ ಕೇಂದಿ ಹುಟ್ಟುವಳಿ ಹಕ್ಕು ತಹಲ್ ವರಿಗೂ ಗೌರ್ನಮೆಂಟಿನಿಂದ ಸ್ಥಿರಪಡಿಸಲ್ಪಡದೆ ಇರುವ ಶ್ರೀ ಪರಕಾಳಿಸ್ವಾಮಿಗಳವರ ಮಠ ಮತ್ತು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠಗಳಿಗೆ ಸೇರಿದ ಇನಾಂ ಗ್ರಾಮಗಳ ಕೇಂದಿ ಹುಟ್ಟುವಳಿಗೆ ಮಠದ ಹಕ್ಕನ್ನು ಸ್ಥಿರಪಡಿಸುವ ವಿಚಾರದಲ್ಲಿ ಮೈಸೂರು ಡಿಸ್ಟ್ರಿಕ್ಟ ಎಕ್ಸೆಸ್ಟ್ರಾ ಆಫಿಸರವರು 1—11—1907ನೆ ತಾರೀಖಿನ ದಿವಸ ಅವರ ಆಫೀಸಿನಲ್ಲಿ ಅವಶ್ಯವಿರುವ ವಿಚಾರಣೆಯನ್ನು ನಡಿಸುತ್ತಾರೆ.

ಸದರಿ ಮತಗಳ ಏಜಂಟರುಗಳು ಮೇಲ್ಕಂಡ ಆಫೀಸರ ಬಳಿ ಸದರಿ ತಾರೀಖುನಲ್ಲಿ ತಮ್ಮಲ್ಲಿ ಇರತಕ್ಕ ಸನ್ನದು, ಇನಾಂ ಟೈಟಲ್ ಡೀಡು, ಮುಚ್ಚಳಿಕೆ ವಗೈರೆ ಸಕಲ ದಾಖಲಾತಿಗಳನ್ನು ಹಾಜರ್‌ಪಡಿಸತಕ್ಕದ್ದು. ಹಾಗೆ ಮಾಡದೆ ತಪ್ಪಿದಲ್ಲಿ ರೂಲ್ಸು ಮೇರೆ ಕ್ರಮ ಜರಿಗಿಸುತ್ತೆ. ನಂತರ ಬರುವ ಯಾವ ತಕರಾರನ್ನೂ ಅಂಗೀಕರಿಸಲಾಗಲಾರದೆಂದು ಪ್ರಸಿದ್ಧಪಡಿಸಿದೆ.

ಟಿ. ಕೆ. ಸುಂದರರಾಜೈಯ್ಯಂಗಾರ್,
ಫಾರ್ ಡೆಪ್ಯುಟಿ ಕಮಿಷನರ್.

ಶಿವಮೊಗ್ಗ ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜಿ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರಿವ ಪ್ರಸಿದ್ಧಪತ್ರಿಕೆ.

ತಾರೀಖು 26–30ನೆ ಸೆಪ್ಟಂಬರ್ 1907.

1. ಕಂದಾಯದ ಬಾಕೀದಾರರಾದ ಇನಾಂ ಕಣ್ಣೂರು ಗ್ರಾಮದ ಚಿದಂಬರಭಟ್ಟ ವಗೈರೆಯರಿಂದ ಬರಬೇಕಾದ ಜಮ್ಮಿ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಶಿವಮೊಗ್ಗ ಡಿಸ್ಟ್ರಿಕ್ಟ ಶಿಕಾರಿಪುರ ತಾಲ್ಲೂಕು ಕಳ್ಳೇರಿಯಲ್ಲಿ ಶಿವಮೊಗ್ಗ ಡಿವಿಜ್ ಅಸಿಸ್ಟೆಂಟ್ ಕಮಿಷನರ್ ಸಾಹೇಬರವರ ರೂಬರೂ 1907ನೆ ಇಸವಿ ನವಂಬರ್ 11ನೆ ತಾರೀಖಿನಲ್ಲಿ (ಸೋಮವಾರ) ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಹಗಲು 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಿಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1906—07ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಖ್ಮೀಲ್ ಮೇರಿಗೆ ರೂಪಾಯಿ 392—6—3 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟ್ಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಖಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯುಟಿ ಕಮ್ಮಿಷನರವರಿಂದಾಗಲಿ ಯಾ ಈ ಭಾಗದಲ್ಲಿ ಅಧಿಕಾರವನ್ನು ಹೊಂದಿದ ಇತರ ಅಧಿಕಾರಿಯಿಂದಾಗಲಿ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟು ಕೂಡ್ಲೆ, ಹರಾಜುದಾರನು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾ